# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/10/2016-17 ದಿನಾಂಕ :20-10-2016.

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| 1.ಚಿನಿವಾಲರ ಶಂಕ್ರಪ್ಪ ತಂದೆ ಲೇಟ್ ಚಿನಿವಾಲರ ಸಣ್ಣ ತೋಟಪ್ಪ<br>2.ಚಿನಿವಾಲರ ಶಿವಪ್ಪ ತಂದೆ ಲೇಟ್ ಚಿನಿವಾಲರ ಸಣ್ಣ ತೋಟಪ್ಪ<br>ಗ್ರಾಮ:-ಕನ್ನಿಹಳ್ಳಿ ತಾ:-ಹ.ಬೊ.ಹಳ್ಳಿ | ಚಿನಿವಾಲರ ಕುಶಾಲಮ್ಮ ಗಂಡ ಲೇಟ್ ಪುಟ್ಟಪ್ಪ<br>ಗ್ರಾಮ:-ಕನ್ನಿಹಳ್ಳಿ ತಾ:-ಹ.ಬೊ.ಹಳ್ಳಿ |

ವಿವಾದಿತಜಮೀನಿನ ವಿವರ:

| ಕ್ರ.ಸಂ. | ತಾಲೂಕು | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಕೋಗಳಿ | 62/ಎ | 7-06 | ಖುಷ್ಕಿ |

**ಪೀಠಿಕೆ:-**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಕೋಗಳಿ ಗ್ರಾಮದ ವಿವಾದಿತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಕನ್ನಿಹಳ್ಳಿ ಗ್ರಾಮದ ನಿವಾಸಿಯಾದ 1.ಚಿನಿವಾಲರ ಶಂಕ್ರಪ್ಪ ತಂದೆ ಲೇಟ್ ಚಿನಿವಾಲರ ಸಣ್ಣ ತೋಟಪ್ಪ 2.ಚಿನಿವಾಲರ ಶಿವಪ್ಪ ತಂದೆ ಲೇಟ್ ಚಿನಿವಾಲರ ಸಣ್ಣ ತೋಟಪ್ಪ ಇವರು ಪಾಲು ವಿಭಾಗ ಪ್ರಕಾರ ಹಕ್ಕು ಬದಲಾವಣೆಯನ್ನು ಮಾಡಲು ದಿನಾಂಕ:23.06.2016 ರಂದು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ-21ರ ನೋಟೀಸನ್ನು ದಿನಾಂಕ:25.06.2016 ರಂದು ಜಾರಿ ಮಾಡಲಾಗಿ, ನಿಗದಿತ ಅವಧಿಯೊಳಗೆ ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಿರುವುದಿಲ್ಲ. ಚಿನಿವಾಲರ ಕುಶಾಲಮ್ಮ ಗಂಡ ಲೇಟ್ ಪುಟ್ಟಪ್ಪ ಇವರು ನಮೂನೆ-21ಕ್ಕೆ ಸಹಿ ಮಾಡಲು ನಿರಾಕರಿಸಿರುತ್ತಾರೆ. ಕಾರಣ, ಎಂ.ಆರ್.ನಂ.58/15-16ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿ ರವರು ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಿರುತ್ತಾರೆ. ಉಭಯ ಪಕ್ಷಕಾರರಿಗೆ ದಿನಾಂಕ:11.08.2016ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನು ದಿನಾಂಕ:11.08.2016 ರಿಂದ 22.09.2016 ರವರೆಗೆ ವಿಚಾರಣೆಯನ್ನು ಮಾಡಲಾಯಿತು. ಉಭಯರು ಹಾಜರಾಗಿರುತ್ತಾರೆ. ತಕರಾರುದಾರರು/ಜಂಟಿ ಪಟ್ಟಾದಾರರು ಹೇಳುವಂತೆ; ಸದರಿ ಜಮೀನಿನಲ್ಲಿ ವಿಸ್ತೀರ್ಣ 2-00 ಎಕರೆ ನನ್ನ ಪಾಲಿಗೆ ಬರಬೇಕೆಂದು ಎಂದು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ. ಅರ್ಜಿದಾರರು ಹಾಜರಾಗಿ ಹೇಳುವಂತೆ; ಹಳೇ ಪಾಲುಪಟ್ಟಿ ಪ್ರಕಾರ ನಮ್ಮ ಹೆಸರಿಗೆ ಪಾಲು ವಿಭಾಗ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ಮುಂದುವರೆದು ತಕರಾರುದಾರರು ಹೇಳುವಂತೆ; ಪ್ರಕರಣದಲ್ಲಿ ಅರ್ಜಿದಾರರ ಹೆಸರಿಗೆ ಪಾಲು ವಿಭಾಗ ಪ್ರಕಾರ ಹಕ್ಕು ಬದಲಾವಣೆ ಮಾಡಲು ನನ್ನ ಯಾವುದೇ ತಂಟೆ, ತಕರಾರು ಇರುವುದಿಲ್ಲ ಎಂದು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ಪುಟ-2ಕ್ಕೆ..

ಪ್ರಕರಣದಲ್ಲಿ ಉಭಯರು ನೀಡಿದ ಹೇಳಿಕೆ ಮತ್ತು ದಾಖಲೆಯನ್ನು ಪರಿಶೀಲಿಸಿ, ಅರ್ಜಿದಾರರ ಹೆಸರಿಗೆ ಪಾಲು ವಿಭಾಗ ಪ್ರಕಾರ ಹಕ್ಕುಬದಲಾವಣೆ ಮಾಡಲು ಈ ಕೆಳಕಂಡಂತೆ ಆದೇಶ;

## -:ಆದೇಶ:-

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಎಂ.ಆರ್.ನಂ.58/2015-16ರ ಪ್ರಕರಣದಲ್ಲಿ ಈ ಕೆಳಗಿನಂತೆ ಪಾಲು ವಿಭಾಗ ಪ್ರಕಾರ ಹಕ್ಕು ಬದಲಾವಣೆ ಮಾಡಲು ಆದೇಶಿಸಿದೆ.

| *ಕ್ರಮ ಸಂಖ್ಯೆ* | *ತಾಲೂಕು* | *ಗ್ರಾಮ* | *ಸರ್ವೆ ನಂಬರ್* | ವಿಸ್ತೀರ್ಣ [ಎಕರೆಗಳಲ್ಲಿ] | *ಹಕ್ಕು ಬದಲಾವಣೆ ಪಡೆದವರು* |
|---|---|---|---|---|---|
| 01. | ಹಗರಿಬೊಮ್ಮನಹಳ್ಳಿ | ಕೋಗಳಿ | 62/ಎ | 3-06 | ಚಿನಿವಾಲರ ಶಂಕ್ರಪ್ಪ ತಂದೆ ಲೇಟ್ ಚಿನಿವಾಲರ ಸಣ್ಣ ತೋಟಪ್ಪ |
| | | | | 4-00 | ಚಿನಿವಾಲರ ಶಿವಪ್ಪ ತಂದೆ ಲೇಟ್ ಚಿನಿವಾಲರ ಸಣ್ಣ ತೋಟಪ್ಪ |

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:20.10.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

20/10/16

[ವಿ.ಹೆಚ್.ಮಲ್ಲಿಕಾರ್ಜುನ]
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ,ಕೋಗಳಿ

ಪ್ರತಿಯನ್ನು:-

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಕಂದಾಯ ನಿರೀಕ್ಷಕರು, ಕೋಗಳಿ.
4. ಶುದ್ಧಪ್ರತಿ ಕಡತಕ್ಕೆ.